ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 11/2/21

# ಕಲಾಪಕ್ಕೆ ಅಡ್ಡಿ 'ಕಾರ್ಯತಂತ್ರ'

ನವದೆಹಲಿ (ಪಿಟಿಐ): 'ರೈತ ಹೋರಾಟವನ್ನು ಮುಂದಿಟ್ಟುಕೊಂಡು ಸಂಸತ್ತಿನ ಕಲಾಪಕ್ಕೆ ಅಡ್ಡಿಪಡಿಸುತ್ತಿರುವವರು ಒಂದು ವ್ಯವಸ್ಥಿತ ಕಾರ್ಯತಂತ್ರದ ಭಾಗವಾಗಿ ಅದನ್ನು ಮಾಡುತ್ತಿದ್ದಾರೆ' ಎಂದು ಪ್ರಧಾನಿ ನರೇಂದ್ರ ಮೋದಿ ಬುಧವಾರ ಆರೋಪಿಸಿದರು.

ರಾಷ್ಟ್ರಪತಿ ಭಾಷಣಕ್ಕೆ ವಂದನಾ ನಿರ್ಣಯ ಚರ್ಚೆಯಲ್ಲಿ ಮಾತನಾಡಿದ ಅವರು, 'ಹೊಸ ಕೃಷಿ ಕಾಯ್ದೆಗಳು ಜಾರಿಯಾದರೆ, ಹಳೆಯ ಕೃಷಿ ಮಾರುಕಟ್ಟೆ ವ್ಯವಸ್ಥೆ ರದ್ದಾಗುವುದಿಲ್ಲ. ಹಳೆಯ ವ್ಯವಸ್ಥೆಯಲ್ಲೇ ಮುಂದುವರಿಯಲು ಇಚ್ಛಿಸುವವರು ಅದನ್ನು ಮುಂದುವರಿಸಬಹುದು' ಎಂದರು.

'ಇಂಥ ಕಾರ್ಯತಂತ್ರಗಳ ಮೂಲಕ ಜನರ ಮನಸ್ಸನ್ನು ಗೆಲ್ಲಲು ಸಾಧ್ಯವಿಲ್ಲ. ಇದನ್ನು ಜೀರ್ಣಿಸಿಕೊಳ್ಳಲು ವಿರೋಧ ಪಕ್ಷಗಳಿಗೆ ಸಾಧ್ಯವಾಗುತ್ತಿಲ್ಲ' ಎಂದು ವಾಗ್ದಾಳಿ ನಡೆಸಿದರು.

ಕಾಯ್ದೆಗಳ ಬಗ್ಗೆ ಸರ್ಕಾರದ ನಿಲುವನ್ನು ಪ್ರಧಾನಿ ಸ್ಪಷ್ಟಪಡಿಸುತ್ತಿದ್ದಂತೆಯೇ ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್ ಸದಸ್ಯರು ಸಭಾತ್ಯಾಗ ನಡೆಸಿದ್ದರು. ತಮ್ಮ ಭಾಷಣದ ವೇಳೆ ಕಾಂಗ್ರೆಸ್ ಅನ್ನೇ ಗುರಿಯಾಗಿಟ್ಟು ಮಾತನಾಡಿದ ಮೋದಿ, 'ಕಾಂಗ್ರೆಸ್ ವಿಭಜಿತ ಮತ್ತು ಗೊಂದಲಕ್ಕೆ ಒಳಗಾಗಿರುವ ಪಕ್ಷ. ಕಾಯ್ದೆಗಳ ವಿಚಾರವಾಗಿ ರಾಜ್ಯಸಭೆಯಲ್ಲಿ ಒಂದು ನಿಲುವು, ಲೋಕಸಭೆಯಲ್ಲಿ ಇನ್ನೊಂದು ನಿಲುವನ್ನು ತಳೆದಿದೆ ಎಂದು ಹೇಳಿದರು.

'ಕೃಷಿ ಕಾಯ್ದೆಗಳ ಪ್ರತಿಯೊಂದು ಅಂಶದ ಬಗ್ಗೆ ಚರ್ಚೆಗೆ ಮತ್ತು ಕೊರತೆಗಳಿದ್ದರೆ ಅದನ್ನು ಸರಿಪಡಿಸಲು ಸರ್ಕಾರ ಸಿದ್ಧವಿದೆ. ಕಾಯ್ದೆಗಳ ವಿರುದ್ಧ ಧ್ವನಿ ಎತ್ತುತ್ತಿರುವ ರೈತರ ಬಗ್ಗೆ ನಮ್ಮೆಲ್ಲರಿಗೂ ಗೌರವವಿದೆ. ಆದರೆ 'ಆಂದೋಲನ ಜೀವಿ'ಗಳು ಚಳವಳಿಯನ್ನು ತಮ್ಮ ಲಾಭಕ್ಕೆ ಬಳಸಿಕೊಳ್ಳುತ್ತಿದ್ದಾರೆ' ಎಂದು ಮೋದಿ ಆರೋಪಿಸಿದರು.

ಕಾಂಗ್ರೆಸ್ ಸದಸ್ಯರು ಸಭಾತ್ಯಾಗ ಮಾಡುವುದಕ್ಕೂ ಮುನ್ನ, ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ಅಧಿರ್‌ರಂಜನ್ ಚೌಧರಿ ಅವರು ಪ್ರಧಾನಿ ಭಾಷಣಕ್ಕೆ ಹಲವು ಬಾರಿ ಅಡ್ಡಿಪಡಿಸಿದರು.

ಆಗ ಚೌಧರಿ ಅವರನ್ನು ಉದ್ದೇಶಿಸಿ ಮಾತನಾಡಿದ ಮೋದಿ, 'ಅಧಿರ್‌ಜಿ ಇದು ಮೇರೆ ಮೀರುತ್ತಿದೆ. ನಿಮ್ಮ ಬಗ್ಗೆ ನನಗೆ ಅಪಾರ ಗೌರವ ಇದೆ. ನೀವು ಏನು ಹೇಳಬೇಕು ಎಂದಿದ್ದೀರೋ ಅದನ್ನು ಹೇಳಿಯಾಯಿತು. ಅದನ್ನು ಹೇಗೆ ಸ್ವೀಕರಿಸಬೇಕೋ ಹಾಗೆ ಸ್ವೀಕರಿಸಿದ್ದೂ ಆಯಿತು' ಎಂದು ಕುಟುಕಿದರು.

ಇನ್ನೊಂದು ಸುದ್ದಿ 7